ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

23

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 11/9/2020

# ಮೇನಲ್ಲಿ ಎತ್ತಿನಹೊಳೆ ಯೋಜನೆ ಪೂರ್ಣ

ಸಂ.ಕ.ಸಮಾಚಾರ, ಬೆಂಗಳೂರು 11/9/20

ಎತ್ತಿನಹೊಳೆ ಯೋಜನೆಗೆ ಸಂಬಂಧಿಸಿದಂತೆ ಭೂ–ಸ್ವಾಧೀನ ಪ್ರಕ್ರಿಯೆ ಕಾರ್ಯವು ಚುರುಕುಗೊಂಡಿದೆ. ಯೋಜನೆಯ ಅನುಷ್ಠಾನದಲ್ಲಿ ಈ ಭಾಗದ ಜನಪ್ರತಿನಿಧಿಗಳು ಪಕ್ಷಭೇದ ಮರೆತು ಸಹಕಾರ ನೀಡಬೇಕು. ಅಂದಾಗ ಮಾತ್ರ ನಿಗದಿತ ಕಾಲಮಿತಿಯೊಳಗೆ ಕಾಮಗಾರಿ ಮುಗಿಸಬಹುದು ಎಂದು ಜಲಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ಹೇಳಿದರು.

ವಿಕಾಸಸೌಧದಲ್ಲಿ ಗುರುವಾರದಂದು ನಡೆದ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತದ ಪ್ರಗತಿ ಪರಿಶೀಲನೆ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕುಡಿಯುವ ನೀರಿನ ಮಹತ್ವದ ಯೋಜನೆಗಳಲ್ಲೊಂದಾದ ಎತ್ತಿನಹೊಳೆ ಮೊದಲ ಹಂತದ ಕಾಮಗಾರಿ ಮುಂಬರುವ ಮೇ ತಿಂಗಳ ಒಳಗೆ ಪೂರ್ಣಗೊಳ್ಳಲಿದೆ ಎಂದು ಸಚಿವ ರಮೇಶ್ ಜಾರಕಿಹೊಳಿ ತಿಳಿಸಿದರು.

**ಹಾಸನ ಬೆಳೆಗಾರರ ಸಂಘದ ಮನವಿ:** ಇದೇ ವೇಳೆ, ಎತ್ತಿನಹೊಳೆ ಯೋಜನೆಗೆ ಭೂಮಿ ನೀಡಿದ ಹಾಸನ ಜಿಲ್ಲಾ ರೈತರು ಮತ್ತು ಬೆಳೆಗಾರರ ಸಂಘದ ಮುಖಂಡರು ಸಚಿವ ರಮೇಶ್ ಜಾರಕಿಹೊಳಿಯವರನ್ನು ಭೇಟಿ ಮಾಡಿ ಅಹವಾಲು ಸಲ್ಲಿಸಿದರು. ಯೋಜನೆಗಾಗಿ ಭೂಮಿ ಕಳೆದುಕೊಂಡ ರೈತ ಮಕ್ಕಳ ವಿದ್ಯಾರ್ಜನೆಗೆ ಶಾಲೆ ನಿರ್ಮಾಣ, ಯೋಜನಾ ಪ್ರದೇಶದಲ್ಲಿ ಉತ್ತಮವಾದ ರಸ್ತೆ ಸೌಲಭ್ಯಗಳನ್ನು ಒದಗಿಸಬೇಕು ಎಂದು ಮನವಿ ಮಾಡಿದರು.

ರೈತ ಮುಖಂಡರ ಬೇಡಿಕೆಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಬಳಿಕ ಸಚಿವ ರಮೇಶ್ ಜಾರಕಿಹೊಳಿ ಭರವಸೆ ನೀಡಿದರು ಎಂದು ಆಪ್ತ ಮೂಲಗಳು ತಿಳಿಸಿವೆ. ಸಭೆಯಲ್ಲಿ ಜಲಸಂಪನ್ಮೂಲ ಇಲಾಖೆ ಕಾರ್ಯದರ್ಶಿ ರಾಕೇಶ್ ಸಿಂಗ್, ವಿಶ್ವೇಶ್ವರಯ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಲಕ್ಷ್ಮಣ್‌ರಾವ್ ಪೇಶ್ವೆ, ಕಾಫೀ ಬೆಳೆಗಾರರ ಸಂಘದ ಅಧ್ಯಕ್ಷ ಕೃಷ್ಣಪ್ಪ, ಹಾಸನ ಮತ್ತು ಸಕಲೇಶಪುರ ಭಾಗದ ರೈತ ಮುಖಂಡರು ಪಾಲ್ಗೊಂಡಿದ್ದರು.



ಕೋರಮಂಗಲದ ಕ್ರೀಡಾಗ್ರಾಮದಲ್ಲಿ ತ್ಯಾಜ್ಯ ನೀರು ರೇಚಕ ಕಟ್ಟಡವನ್ನು ಮುಖ್ಯಮಂತ್ರಿ ಯಡಿಯೂರಪ್ಪ ಆನ್‌ಲೈನ್ ಮೂಲಕ ಉದ್ಘಾಟಿಸಿದರು.

ಡ್ರಗ್ಸ್ ಆರೋಪಿ ರಾಗಿಣಿ ಬಿಜೆಪಿ ಪರ ಪ್ರಚಾರ ಮಾಡಿದ ಬಗ್ಗೆ ಪತ್ರಕರ್ತರು ಕೇಳಿದಾಗ, ನಟಿ ರಾಗಿಣಿ ಎಂದು ಆಕೆಯನ್ನು ಪ್ರಚಾರ ಕಾರ್ಯಕ್ಕೆ ಇಳಿಸಲಾಗಿತ್ತೇ ವಿನಃ ಡ್ರಗ್ಸ್ ಹುಡುಗಿ ಎಂದಲ್ಲ ಎಂದು ಸಚಿವ ರಮೇಶ್ ಜಾರಕಿಹೊಳಿ ಅವರು ಮಾರ್ಮಿಕವಾಗಿ ಉತ್ತರಿಸಿದರು. ಇನ್ನು ಮುಖ್ಯಮಂತ್ರಿ ಪುತ್ರ ಬಿ.ವೈ.ವಿಜಯೇಂದ್ರ ಅವರೂ ಬಿಎಸ್‌ವೈ ತರಹ ಲೀಡರ್ ಆಗಿ ಬೆಳೆಯುತ್ತಾರೆ. ಬಿಜೆಪಿಯವರಿಗೆ ವಿಜಯೇಂದ್ರ ಎಂದರೆ ಹೆಮ್ಮೆ.. ಹೀಗಿರುವಾಗ ಬಿಜೆಪಿಯವರೇ ವಿಜಯೇಂದ್ರ ಅವರ ಮೇಲೆ ಭ್ರಷ್ಟಾಚಾರದ ಆರೋಪ ಯಾಕೆ ಮಾಡುತ್ತಾರೆ? ಎಂದು ಪ್ರಶ್ನಿಸಿದ ಜಾರಕಿಹೊಳಿಯವರು, ಸಚಿವ ಸ್ಥಾನದ ಆಕಾಂಕ್ಷಿಗಳಾದ ಹೆಚ್.ವಿಶ್ವನಾಥ್, ಆರ್.ಶಂಕರ್, ಎಂಟಿಬಿ ನಾಗರಾಜ್ ಅವರು ಸ್ವಲ್ಪ ತಾಳ್ಮೆಯಿಂದ ಕಾಯಬೇಕು. ನಾವೂ ಕೋರ್ಟು, ಕಚೇರಿಯೆಂದು ಅಲೆದಾಡಲಿಲ್ಲವೆ? 14 ತಿಂಗಳು ಕಾಯಲಿಲ್ಲವೆ? ಬಿಎಸ್‌ವೈ ಅವರ ಮೇಲೆ ನಂಬಿಕೆ ಇಟ್ಟು ಕಾಯಬೇಕು ಎಂದರು.